**National**
**Kannada**
**03.02.2026 1.10 pm**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ದೇಶದ ಹದಿನೆಂಟು ಶಕ್ತಿ ಪೀಠಗಳಲ್ಲಿ ಒಂದಾದ ಒಡಿಶಾದ ಜಾಜ್‌ಪುರ ಜಿಲ್ಲೆಯ ಮಾ ಬಿರಾಜ ದೇವಸ್ಥಾನದಲ್ಲಿ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಾರ್ಥನೆ

೨. ಭಾರತದೊಂದಿಗಿನ ಅಮೆರಿಕದ ಅದ್ಭುತ ಸಂಬಂಧವು ಮುಂದುವರಿಯಲಿದೆ ; ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

೩. ದೇಶದಲ್ಲಿ ಪ್ರಸ್ತುತ ೨೮ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ತರಬೇತಿ ಕೇಂದ್ರಗಳ ಕಾರ್ಯ ನಿರ್ವಹಣೆ - ಕೇಂದ್ರ ಸಚಿವ ನಿತ್ಯಾನಂದ ರೈ

೪. ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ; ಗುಜರಾತ್ ಜೈಂಟ್ಸ್, ದೆಹಲಿ ಕ್ಯಾಪಿಟಲ್ಸ್ ಇಂದು ಮುಖಾಮುಖಿ

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ದೇಶದ ಹದಿನೆಂಟು ಶಕ್ತಿ ಪೀಠಗಳಲ್ಲಿ ಒಂದಾದ ಒಡಿಶಾದ ಜಾಜ್‌ಪುರ ಜಿಲ್ಲೆಯ ಮಾ ಬಿರಾಜ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು. ದೇವಾಲಯ ಸಂಕೀರ್ಣದೊಳಗೆ ಇರುವ ಪವಿತ್ರ ನಭಿ ಗಯಾ ಸ್ಥಳದಲ್ಲಿ ಅವರು ತಮ್ಮ ಅಗಲಿದ ಪೂರ್ವಜರಿಗೆ ಧಾರ್ಮಿಕ ಅರ್ಪಣೆಯಾದ ಪಿಂಡ ದಾನವನ್ನು ಸಹ ಮಾಡಿದರು. ರಾಷ್ಟ್ರಪತಿಯವರ ಈ ಭೇಟಿಯು ಅವರ ಒಡಿಶಾ ಪ್ರವಾಸದ ಎರಡನೇ ದಿನವಾಗಿದ್ದು, ದರ್ಶನದ ನಂತರ, ಅವರು ಬಾಲಸೋರ್‌ಗೆ ತೆರಳಿದರು. ಅಲ್ಲಿ ರಾಷ್ಟ್ರಪತಿ ಫಕೀರ್ ಮೋಹನ್ ವಿಶ್ವವಿದ್ಯಾಲಯದ ೧೨ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

**<>><><*><><<>**

ಭಾರತದೊಂದಿಗಿನ ಅಮೆರಿಕದ ಅದ್ಭುತ ಸಂಬಂಧವು ಮುಂದುವರಿಯಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ತಮ್ಮ ಅತ್ಯುತ್ತಮ ಸ್ನೇಹಿತರಲ್ಲಿ ಒಬ್ಬರು ಮತ್ತು ಭಾರತದ ಪ್ರಭಾವಿ ನಾಯಕ ಎಂದು ಟ್ರಂಪ್ ತಿಳಿಸಿದ್ದಾರೆ. ಬಹುತೇಕರಿಗೆ ಸಾಧ್ಯವಾಗದ ಕೆಲಸವನ್ನು ತಾವು ಮತ್ತು ಪ್ರಧಾನಿ ಮೋದಿ ಇಬ್ಬರೂ ಮಾಡಿ ಮುಗಿಸುವಂತಹ ವ್ಯಕ್ತಿಗಳು ಎಂದು ಟ್ರಂಪ್ ಅಭಿಪ್ರಾಯಪಟ್ಟಿದ್ದಾರೆ.

<><><*><><>

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಧಾನಿ ನರೇಂದ್ರ ಮೋದಿಯವರನ್ನು ನಿಜವಾಗಿಯೂ ಉತ್ತಮ ಸ್ನೇಹಿತರೆಂದು ಪರಿಗಣಿಸುತ್ತಾರೆ ಎಂದು ಭಾರತಕ್ಕೆ ಅಮೆರಿಕದ ರಾಯಭಾರಿ ಸೆರ್ಗಿಯೊ ಗೋರ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಭಾರತ ಮತ್ತು ಅಮೆರಿಕ ನಡುವಿನ ವ್ಯಾಪಾರ ಒಪ್ಪಂದದ ಸುದ್ದಿಯಿಂದ ರೋಮಾಂಚನಗೊಂಡಿದ್ದೇನೆ ಎಂದು ರಾಯಭಾರಿ ಗೋರ್ ಹೇಳಿದ್ದಾರೆ.

<><><*><><>

ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ, ಭಾರತ-ಅಮೆರಿಕ ವ್ಯಾಪಾರ ಒಪ್ಪಂದವನ್ನು ದ್ವಿಪಕ್ಷೀಯ ಆರ್ಥಿಕ ಸಂಬಂಧಗಳಲ್ಲಿ ನಿರ್ಣಾಯಕ ಹೆಜ್ಜೆ ಎಂದು ಕರೆದಿದ್ದಾರೆ. ಮೇಡ್ ಇನ್ ಇಂಡಿಯಾ ಉತ್ಪನ್ನಗಳ ಮೇಲಿನ ಸುಂಕವನ್ನು ಶೇಕಡ ೧೮ಕ್ಕೆ ಇಳಿಸುವುದರಿಂದ ಎರಡೂ ದೇಶಗಳ ನಡುವಿನ ಬೆಳವಣಿಗೆ ಮತ್ತು ಸಹಕಾರಕ್ಕೆ ಹೊಸ ಮಾರ್ಗಗಳು ತೆರೆಯುತ್ತವೆ ಎಂದು ಗಡ್ಕರಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಫಲಿತಾಂಶವನ್ನು ಖಚಿತಪಡಿಸಿಕೊಳ್ಳಲು ನಾಯಕತ್ವ ವಹಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಗಡ್ಕರಿ ಅಭಿನಂದಿಸಿದ್ದಾರೆ. ಈ ಒಪ್ಪಂದವು ವಿಶ್ವಾಸವನ್ನು ಬಲಪಡಿಸುತ್ತದೆ, ವ್ಯವಹಾರಿಕ ವಿಶ್ವಾಸವನ್ನು ಹೆಚ್ಚಿಸುತ್ತದೆ ಹಾಗೂ ಎರಡೂ ರಾಷ್ಟ್ರಗಳಿಗೆ ಆಳವಾದ ವ್ಯಾಪಾರ, ಹೂಡಿಕೆ ಮತ್ತು ಹಂಚಿಕೆಯ ಸಮೃದ್ಧಿಗೆ ವೇದಿಕೆಯನ್ನು ಸಿದ್ಧಪಡಿಸುತ್ತದೆ ಎಂದು ಗಡ್ಕರಿ ತಿಳಿಸಿದ್ದಾರೆ.

<><><*><><>

ದೇಶದ ವಿವಿಧ ಪ್ರದೇಶಗಳಲ್ಲಿ ಪ್ರಸ್ತುತ ೨೮ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಹೇಳಿದ್ದಾರೆ. ಲೋಕಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಈ ಕೇಂದ್ರಗಳು ಆಧುನಿಕ ತಂತ್ರಗಳೊಂದಿಗೆ ಸಾಂಪ್ರದಾಯಿಕ ವಿಧಾನಗಳ ಮೂಲಕ ಸಿಎಪಿಎಫ್ ಸಿಬ್ಬಂದಿಗೆ ತರಬೇತಿ ನೀಡುತ್ತಿವೆ. ಪ್ರಸ್ತುತ ಸವಾಲುಗಳು ಮತ್ತು ಭವಿಷ್ಯದ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಪಡೆಗಳಿಗೆ ಸಮಗ್ರ ತರಬೇತಿಯನ್ನು ಖಚಿತಪಡಿಸಿದೆ ಎಂದರು. ಈ ತರಬೇತಿಯ ಪರಿಣಾಮವಾಗಿ, ನಕ್ಸಲಿಸಂ ಮತ್ತು ಎಡಪಂಥೀಯ ಉಗ್ರವಾದವನ್ನು ದೇಶದಿಂದ ಬಹುತೇಕ ನಿರ್ಮೂಲನೆ ಮಾಡಲಾಗಿದೆ ಹಾಗೂ ಈ ವರ್ಷದ ಮಾರ್ಚ್ ವೇಳೆಗೆ ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ನಿರೀಕ್ಷೆಯಿದೆ ಎಂದು ಸಚಿವರು ಹೇಳಿದರು. ಸುಧಾರಿತ ತರಬೇತಿಯು ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಗಳನ್ನು ಬಲಪಡಿಸಿದೆ ಮತ್ತು ಆಂತರಿಕ ಭದ್ರತೆಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡಿದೆ ಎಂದು ಅವರು ತಿಳಿಸಿದರು.

<>><><*><><<>

ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ ಆಯೋಜಿಸಿದ್ದ ವಿಕಸಿತ ಭಾರತ ಯುವ ನಾಯಕರ ಸಂವಾದ ೨೦೨೬ ಕಾರ್ಯಕ್ರಮದಲ್ಲಿ ದೇಶಾದ್ಯಂತದ ಯುವ ನಾಯಕರು, ಪ್ರಧಾನ ಮಂತ್ರಿಗಳು ಮತ್ತು ಕ್ಯಾಬಿನೆಟ್ ಮಂತ್ರಿಗಳ ಎದುರು ಮಂಡಿಸಿದ ನವೀನ ವಿಚಾರಗಳಲ್ಲಿ ಹಲವು ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಅಳವಡಿಸಿಕೊಳ್ಳಲಾಗಿದೆ. ಕರ್ನಾಟಕದಿಂದಲೂ ಈ ಸಂವಾದದಲ್ಲಿ ಬೆಂಗಳೂರಿನ ಪದವಿ ವಿದ್ಯಾರ್ಥಿನಿ ಅನುಷ್ಕಾ ಸಾಲಗಾಂವಕರ್ ಭಾಗವಹಿಸಿದ್ದು, ಇದು ತಮ್ಮ ಜೀವನದ ಅದ್ಭುತ ಸಂಗತಿ ಎಂದು ಅನುಭವ ಹಂಚಿಕೊಂಡಿದ್ದಾರೆ. ಸಂಪ್ರದಾಯದೊಂದಿಗೆ ನಾವೀನ್ಯತೆ ವಿಚಾರದಲ್ಲಿ ಭಾರತ ಇಂದು ಎಲ್ಲಿದೆ ಎಂಬ ವಿಷಯ ಮಂಡಿಸಿದೆನು. ಅದರಲ್ಲಿಯೂ ಮುಖ್ಯವಾಗಿ ಕೃತಕ ಬುದ್ಧಿಮತ್ತೆ - ಎಐ ಇಂದು ಉದ್ಯೋಗ ಸೇರಿದಂತೆ ಎಲ್ಲ ಕ್ಷೇತ್ರದಲ್ಲೂ ತನ್ನ ಛಾಪು ಮೂಡಿಸುತ್ತಿದೆ. ಇದೇ ವೇಳೆ ಧರ್ಮವೂ ಸಹ ಮುಖ್ಯವಾಗಿದ್ದು ಅದರ ಮಹತ್ವ ಸಾರಬೇಕಿದೆ. ಈ ನಿಟ್ಟಿನಲ್ಲಿ ಕೃತಕಬುದ್ಧಿಮತ್ತೆ ಚಾಟ್ ಬಾಟ್, ಜಾಲತಾಣಗಳಲ್ಲಿ ನಮ್ಮ ಧರ್ಮದಲ್ಲಿನ ಅಹಿಂಸೆ, ನ್ಯಾಯದಂತಹ ಸದ್ಗುಣಗಳು, ದೇವಾಲಯಗಳ ಮಹತ್ವವನ್ನು ಜಗತ್ತಿಗೆ ಪರಿಚಯಿಸುವ ಕೆಲಸವಾಗಬೇಕು ಎಂಬ ಸಂಗತಿಯನ್ನು ವಿವರಿಸಿದ್ದಾಗಿ ತಿಳಿಸಿದ್ದಾರೆ. ಸಂವಾದದಲ್ಲಿ ಡಿಜಿಟಲ್ ಹೆರಿಟೇಜ್ ಪ್ರಿಸರ್ವೇಷನ್ ವಿಷಯವನ್ನು ಸಹ ಮಂಡಿಸಲಾಗಿದ್ದು, ಡಿಜಿಟಲ್ ಮೂಲಕ ನಮ್ಮ ಪರಂಪರೆಯನ್ನು ಕಾಪಾಡಿಕೊಳ್ಳುವತ್ತ ಗಮನ ಹರಿಸಬೇಕೆಂಬುದನ್ನು ಮನವರಿಕೆ ಮಾಡಲಾಗಿತ್ತು. ಈ ಬಾರಿಯ ಬಜೆಟ್‌ನಲ್ಲಿ ಡಿಜಿಟಲ್ ಪ್ರಿಸರ್ವೇಷನ್ ಬಗ್ಗೆ ಪ್ರಸ್ತಾಪಿಸಿದ್ದು, ತಮಗೆ ಸಂತಸ ತಂದಿತು ಎಂದು ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ವ್ಯಕ್ತಪಡಿಸಿದ್ದಾರೆ.

<>><><*><><<>

ನ್ಯೂಯಾರ್ಕ್‌ನ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ನಡೆದ ಸಾಮಾಜಿಕ ಅಭಿವೃದ್ಧಿ ಆಯೋಗದ ೬೪ನೇ ಅಧಿವೇಶನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಅವರು ಸಮಗ್ರ ಮತ್ತು ಹಕ್ಕು ಆಧಾರಿತ ಸಾಮಾಜಿಕ ಅಭಿವೃದ್ಧಿಗೆ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು. ಭಾರತದಲ್ಲಿ ಸಾಮಾಜಿಕ ನ್ಯಾಯ ಹಾಗೂ ಸಾಮಾಜಿಕ ರಕ್ಷಣೆ ಸಾಂವಿಧಾನಿಕ ಖಾತರಿಗಳಲ್ಲಿ ಬೇರೂರಿದೆ ಮತ್ತು ವಿಕಸಿತ ಭಾರತ್ ೨೦೪೭ರ ದೀರ್ಘಕಾಲೀನ ದೃಷ್ಟಿಕೋನಕ್ಕೆ ಹೊಂದಿಕೆಯಾಗಿದೆ ಎಂದು ಹೇಳಿದರು. ಯಾರೂ ಹಿಂದೆ ಉಳಿಯದಂತೆ ನೋಡಿಕೊಳ್ಳಲು ಸಂಪೂರ್ಣ ಸರ್ಕಾರ ಸಂಪೂರ್ಣ ಮತ್ತು ಇಡೀ ಸಮಾಜದ ವಿಧಾನವನ್ನು ಪ್ರತಿಬಿಂಬಿಸುವ ಸಬ್‌ಕಾ ಸಾಥ್, ಸಬ್‌ಕಾ ವಿಕಾಸ್‌ನ ಮಾರ್ಗದರ್ಶಿ ತತ್ವವನ್ನು ಠಾಕೂರ್ ಎತ್ತಿ ತೋರಿಸಿದರು. ಶಿಕ್ಷಣದಲ್ಲಿ ಬಾಲಕಿಯರು ಮತ್ತು ಬಾಲಕಿರ ಸಮಾನ ಭಾಗವಹಿಸುವಿಕೆ, ನೀರಿನ ವಿಸ್ತೃತ ಪ್ರವೇಶ, ಶುದ್ಧ ಅಡುಗೆ ಹಾಗೂ ನೈರ್ಮಲ್ಯ ಮತ್ತು ಮಹಿಳೆಯರನ್ನು ಪ್ರಮುಖ ಫಲಾನುಭವಿಗಳಾಗಿ ಆರ್ಥಿಕ ಸೇರ್ಪಡೆ

ಎಂದು ಉಲ್ಲೇಖಿಸಿ, ಪ್ರಮಾಣ ಮತ್ತು ಸೇರ್ಪಡೆಯನ್ನು ತೋರಿಸುವ ಪ್ರಮುಖ ರಾಷ್ಟ್ರೀಯ ಉಪಕ್ರಮಗಳನ್ನು ಅವರು ಎತ್ತಿ ತೋರಿಸಿದರು.

<>><><*><><<>

ಭಾರತೀಯ ಹೆದ್ದಾರಿ ನಿರ್ವಹಣೆಯು ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದೆ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಡಿಯಲ್ಲಿರುವ ಭಾರತೀಯ ಹೆದ್ದಾರಿ ನಿರ್ವಹಣಾ ಕಂಪನಿ ಲಿಮಿಟೆಡ್, ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯದೊಂದಿಗೆ ನಿನ್ನೆ ಒಪ್ಪಂದಕ್ಕೆ ಸಹಿ ಹಾಕಿದೆ. ರಾಷ್ಟ್ರೀಯ ಹೆದ್ದಾರಿ ಕಾರ್ಯಾಚರಣೆಗಳಲ್ಲಿ ಸೈಬರ್ ಭದ್ರತೆ ಮತ್ತು ದತ್ತಾಂಶ ರಕ್ಷಣೆಯನ್ನು ಬಲಪಡಿಸುವುದು ಈ ಒಪ್ಪಂದದ ಗುರಿಯಾಗಿದೆ. ಸೈಬರ್ ವಿಧಿವಿಜ್ಞಾನ, ಡಿಜಿಟಲ್ ಪುರಾವೆಗಳ ಸಮಗ್ರತೆ, ಸಂಶೋಧನೆ, ತರಬೇತಿ ಮತ್ತು ಸಲಹಾ ಕ್ಷೇತ್ರದಲ್ಲಿ ಸಹಯೋಗದ ಮೇಲೆ ಈ ಒಪ್ಪಂದವು ಕೇಂದ್ರೀಕರಿಸುತ್ತದೆ ಎಂದು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ತಿಳಿಸಿದೆ. ಈ ಪಾಲುದಾರಿಕೆಯು ಬಹು-ಪಥ ಮುಕ್ತ ಹರಿವು, ಸುಧಾರಿತ ಸಂಚಾರ ನಿರ್ವಹಣಾ ವ್ಯವಸ್ಥೆಗಳು ಸೇರಿದಂತೆ ಪ್ರಮುಖ ಹೆದ್ದಾರಿ ತಂತ್ರಜ್ಞಾನಗಳನ್ನು ಒಳಗೊಂಡಿರುತ್ತದೆ, ಜೊತೆಗೆ ಸುರಕ್ಷಿತ ದತ್ತಾಂಶ ಸಂಗ್ರಹಣೆ ಹಾಗೂ ಸೈಬರ್ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸುತ್ತದೆ. ಒಪ್ಪಂದವು ಮೂರು ವರ್ಷಗಳವರೆಗೆ ಮಾನ್ಯವಾಗಿರುತ್ತದೆ.

<>><><*><><<>

ನವದೆಹಲಿಯ ಸಂಸತ್ ಭವನದ ಸಂಕೀರ್ಣದಲ್ಲಿ ಎನ್‌ಡಿಎ ಸಂಸದೀಯ ಪಕ್ಷದ ಸಭೆ ನಡೆಯುತ್ತಿದೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಜೆ.ಪಿ.ನಡ್ಡಾ, ಅಶ್ವಿನಿ ವೈಷ್ಣವ್, ಭೂಪೇಂದರ್ ಯಾದವ್, ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್, ಲೋಕ ಜನಶಕ್ತಿ ಪಕ್ಷದ ಸಂಸದ ಚಿರಾಗ್ ಪಾಸ್ವಾನ್, ಎಐಎಡಿಎಂಕೆ ಸಂಸದ ಎಂ.ತಂಬಿ ದುರೈ ಸೇರಿದಂತೆ ಎನ್‌ಡಿಎ ಸಂಸದರು ಸಭೆಯಲ್ಲಿ ಹಾಜರಿದ್ದರು.

<>><><*><><<>

ಇಂದು ವಡೋದರಾದ ಕೋಟಂಬಿಯಲ್ಲಿರುವ ಬಿಸಿಎ ಕ್ರೀಡಾಂಗಣದಲ್ಲಿ ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್‌ನಲ್ಲಿ, ನಿರ್ಣಾಯಕ ಎಲಿಮಿನೇಟರ್ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ತಂಡವು ದೆಹಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಈ ಪಂದ್ಯವು ಸಂಜೆ ೭:೩೦ ಕ್ಕೆ ಆರಂಭವಾಗಲಿದೆ. ಈ ಪಂದ್ಯದಲ್ಲಿ ಗೆದ್ದ ತಂಡವು ಇದೇ ೫ರಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ನೇರವಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>